**ಅಸಲು ದಾವೆ ಸಂಖ್ಯೆ 281/2024**

**ಪಿ.ಡಬ್ಲ್ಯು:1**

**ದಿನಾಂಕಃ 20-11-2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿಪರ: ಶ್ರೀ. ಬಿ.ಎಸ್.ಪಿ. ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

ದಿನಾಂಕ 29.09.2021 ರ ನೊಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.1 ಎಂದು ಗುರುತಿಸಲಾಯಿತು.

ಒಂದು ಮ್ಯುಟೇಷನ್ ರಿಜಿಸ್ಟರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.2 ಎಂದು ಗುರುತಿಸಲಾಯಿತು.

ಅಟ್ಲಾಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ವಾದಿಯು ಕಡೂರಿನ ತಹಶಿಲ್ದಾರರವರಿಗೆ ನೀಡಿದ ಅರ್ಜಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ.4 ಎಂದು ಗುರುತಿಸಲಾಯಿತು.

ಕಡೂರು ಪೊಲೀಸ್ ಠಾಣೆಯವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು ಗುರುತಿಸಲಾಯಿತು.

ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.6 ಎಂದು ಗುರುತಿಸಲಾಯಿತು.

ನಾಲ್ಕು ಛಾಯಾಚಿತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.7 ರಿಂದ 10 ಎಂದು ಗುರುತಿಸಲಾಯಿತು.

ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ.11 ಎಂದು ಗುರುತಿಸಲಾಯಿತು.

**(ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದು, ಅನುಮತಿ ನೀಡಲಾಯಿತು)**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದ್ದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ

ಸಹಿ/–

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು ಕಡೂರು.